MediaTAR
...Tracking, Analysis & Reportage

| | | | |
|---|---|---|---|
| **PUBLICATION** | Vishwavani | **DATE** | 11.02.2019 |
| **EDITION** | Bangalore | **PAGE NO** | 02 |
| **HEADLINE** | Ultimate aim of Education is not Employment, but Empowerment & Enlightenment, says Honourable Vice President of India, M. Venkaiah Naidu | | |

ಸಿಎಂಆರ್ ವಿವಿ ಕ್ಯಾಂಪಸ್ ಉದ್ಘಾಟನಾ ಕಾರ್ಯಕ್ರಮದಲ್ಲಿ ಉಪರಾಷ್ಟ್ರಪತಿ ವೆಂಕಯ್ಯನಾಯ್ಡು ಕಿವಿಮಾತು

# ಯುವಕರು ವಿಶ್ವ ಪ್ರಜೆಗಳಾಗಿ ಹೊರಹೊಮ್ಮಲಿ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

'ಪ್ರಾಚೀನ ಭಾರತವು ವೈದ್ಯ ಪದ್ಧತಿ, ಐತಿಹಾಸಿಕ ಪರಂಪರೆ ಹಾಗೂ ಶಿಕ್ಷಣ ಪದ್ಧತಿ ಮೂಲಕ 'ವಿಶ್ವಗುರು'ವಾಗಿ ಗುರುತಿಸಿಕೊಂಡಿದೆ. ಈ ನಿಟ್ಟಿನಲ್ಲಿ ದೇಶದ ಯುವಕರು ಜ್ಞಾನಾರ್ಜನೆಯ ಮೂಲಕ 'ವಿಶ್ವ ಪ್ರಜೆ'ಗಳಾಗಿ ಹೊರಹೊಮ್ಮಬೇಕು ಎಂದು ಉಪರಾಷ್ಟ್ರಪತಿ ವೆಂಕಯ್ಯನಾಯ್ಡು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ನಗರದ ಹೆಣ್ಣೂರು ರಸ್ತೆಯಲ್ಲಿ ಸಿಎಂಆರ್ ವಿಶ್ವವಿದ್ಯಾಲಯದ ನೂತನ ಕ್ಯಾಂಪಸ್ ಉದ್ಘಾಟಿಸಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಾಚೀನ ಭಾರತೀಯ ಶಿಕ್ಷಣವು ವೇದಗಳಿಂದ ಹುಟ್ಟಿಕೊಂಡಿದೆ. ನಮ್ಮದ್ದು ಪ್ರಬುದ್ಧ ಸಂಸ್ಕೃತಿ, ಉತ್ತಮ ಜ್ಞಾನ ಮತ್ತು ಬುದ್ಧಿವಂತಿಕೆಯ ಅತ್ಯುತ್ತಮ ಅಭಿವ್ಯಕ್ತಿಯಾಗಿದೆ. ಒಂದು ಕಾಲದಲ್ಲಿ ಭಾರತವು 'ವಿಶ್ವಗುರು' ಎಂದು ಗುರುತಿಸಲ್ಪಟ್ಟಿದೆ ಮತ್ತು ಬುದ್ಧಿವಂತಿಕೆಯ ಒಂದು ಸ್ಥಾನವನ್ನು ಪಡೆದಿದೆ. ಇದೇ ದಿಕ್ಕಿನಲ್ಲಿ ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ಕ್ರೀಡಾ ವಲಯ ಹಾಗೂ ತಂತ್ರಜ್ಞಾನ ಕಲಿಕೆಯಲ್ಲಿ ಜ್ಞಾನರ್ಜನೆಯನ್ನು ಹೆಚ್ಚಿಸಿಕೊಳ್ಳಬೇಕು. ಹೊಸ ಹೊಸ ಆವಿಷ್ಕಾರಗಳನ್ನು ಕಂಡುಹಿಡಿಯುವ ಮೂಲಕ ವಿಶ್ವ ಪ್ರಜೆಗಳಾಗಿ ಬಾಳಬೇಕು ಎಂದು ಹೇಳಿದರು.

ದೇಶವು ಈ ಹಿಂದಿನಿಂದಲೂ ಕೂಡ ಶಿಕ್ಷಣಕ್ಕೆ ಹೆಚ್ಚಿನ ಪ್ರಾಮುಖ್ಯತೆ ಒದಗಿಸಿದೆ. ಇದಕ್ಕೆ ನಳಂದ, ತಕ್ಷಶಿಲ ವಿಶ್ವವಿದ್ಯಾಲಯಗಳಲ್ಲಿನ ಶಿಕ್ಷಣ ಪದ್ಧತಿ ಸಾಕ್ಷಿ. ಪ್ರಸ್ತುತ ಕೇಂದ್ರ ಸರಕಾರ ಸೇರಿದಂತೆ ಸ್ಥಳೀಯ ಸರಕಾರಗಳು ಕೂಡ ಪ್ರಾಥಮಿಕ ಶಿಕ್ಷಣದಿಂದ ಉನ್ನತ ಶಿಕ್ಷಣವನ್ನು ಇನ್ನೂ ಹೆಚ್ಚಿನದಾಗಿ ಪ್ರೋತ್ಸಾಹಿಸಬೇಕಿದೆ ಎಂದು ತಿಳಿಸಿದರು.

ಭಾರತವು ಜಾಗತಿಕ ಮಟ್ಟದಲ್ಲಿ ಆರ್ಥಿಕ ಅಭಿವೃದ್ಧಿ ಮತ್ತು ರಕ್ಷಣಾ ವಲಯದಲ್ಲಿ ಸದೃಢವಾಗಿದೆ. ವಿಶ್ವದಲ್ಲಿಯೇ ಅತ್ಯಧಿಕ ವಿಶ್ವವಿದ್ಯಾಲಯಗಳನ್ನು ಹೊಂದಿದ್ದೇವೆ. ಗುಣಮಟ್ಟದ ಶಿಕ್ಷಣವನ್ನು ನೀಡುತ್ತಿದ್ದೇವೆ. ಆದರೆ, ದೇಶದ ಶಿಕ್ಷಣ ವ್ಯವಸ್ಥೆಯನ್ನು ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಳ್ಳುವ ಮಟ್ಟಕ್ಕೆ ಅಭಿವೃದ್ಧಿ ಸಾಧಿಸಿಲ್ಲ ಎಂದು ಹೇಳಿದರು.

ನ್ಯಾಷನಲ್ ಪಬ್ಲಿಕ್ ಸ್ಕೂಲ್‌ನ ಅಧ್ಯಕ್ಷ ಡಾ. ಕೆ.ಪಿ.ಗೋಪಾಲಕೃಷ್ಣ ಮಾತನಾಡಿ, ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರು 1991ರಲ್ಲಿ ವಿತ್ತ ಸಚಿವರಾಗಿದ್ದ ಸಂದರ್ಭದಲ್ಲಿ ಉದಾರೀಕರಣಕ್ಕೆ ಒತ್ತು ನೀಡಿದ್ದರು. ಇದರಿಂದ ದೇಶದಲ್ಲಿ ಬಹುರಾಷ್ಟ್ರೀಯ ಕಂಪನಿಗಳ ಸ್ಥಾಪನೆಯಿಂದ ಐಟಿ ವಲಯ ಬೆಳವಣಿಗೆಯಾಗಿದೆ. ಆದರೆ, ಇತ್ತೀಚಿನ ಸರಕಾರಗಳು ಶಿಕ್ಷಣ ವ್ಯವಸ್ಥೆಯ ಅಭಿವೃದ್ಧಿಗೆ ಪೂರಕ ಅನುದಾನ ನೀಡುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.



ನಗರದ ಹೆಣ್ಣೂರು ರಸ್ತೆಯಲ್ಲಿ ಸಿಎಂಆರ್ ವಿಶ್ವವಿದ್ಯಾಲಯದ ನೂತನ ಕ್ಯಾಂಪಸ್‌ಗೆ ಉಪ ರಾಷ್ಟ್ರಪತಿ ವೆಂಕಯ್ಯ ನಾಯ್ಡು ಚಾಲನೆ ನೀಡಿದರು. ರಾಜ್ಯ ಸಭಾ ಸದಸ್ಯ ಕೆ.ಸಿ.ರಾಮಮೂರ್ತಿ, ಸಿಎಂಆರ್ ವಿವಿ ಕುಲಪತಿ ಡಾ. ಸಬಿತಾ ರಾಮಮೂರ್ತಿ, ಸಂಸದ ಪಿ.ಸಿ.ಮೋಹನ್ ಮತ್ತಿತರರು ಇದ್ದರು.

> ದೇಶವು ಶೇ. 50ರಷ್ಟು ಕೃಷಿ ಅವಲಂಬಿಸಿದೆ. ಕೃಷಿಯಲ್ಲಿ ಹೊಸ ಹೊಸ ತಂತ್ರಜ್ಞಾನಗಳು ಹಾಗೂ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳುವ ಮೂಲಕ ಅಭಿವೃದ್ಧಿ ಸಾಧಿಸಬೇಕಿದೆ. ಸಂಶೋಧನಾ ವಿದ್ಯಾರ್ಥಿಗಳು ಕೃಷಿ ಕ್ಷೇತ್ರಕ್ಕೆ ಅಗತ್ಯವಾದ ತಂತ್ರಜ್ಞಾನಗಳ ಅಭಿವೃದ್ಧಿಗೆ ಮುಂದಾಗಬೇಕು.
>
> – ವೆಂಕಯ್ಯ ನಾಯ್ಡು ಉಪ ರಾಷ್ಟ್ರಪತಿ

## ಭಾರತ ವಿಶ್ವದಲ್ಲೇ ಅತಿ ದೊಡ್ಡ ಆರ್ಥಿಕ ರಾಷ್ಟ್ರ

ಇಡೀ ಪ್ರಪಂಚ ಇಂದು ಭಾರತದ ಕಡೆಗೆ ನೋಡುತ್ತಿದೆ. ವಿಶ್ವದ ಆರ್ಥಿಕತೆಯಲ್ಲಿ ಭಾರತ ದೊಡ್ಡ ಶಕ್ತಿಯಾಗಿ ಹೊರ ಹೊಮ್ಮುವ ಲಕ್ಷಣಗಳು ಗೋಚರಿಸಿವೆ. ವಿಶ್ವ ಬ್ಯಾಂಕ್ ಮತ್ತು ಮೂಡೀಸ್ ರೇಟಿಂಗ್ಸ್ ಸ್ಕೇಲ್ ಆಧಾರದ ಮೇಲೆ ಶೀಘ್ರದಲ್ಲೇ ಭಾರತ ವಿಶ್ವದ ಅತಿ ದೊಡ್ಡ ಆರ್ಥಿಕ ರಾಷ್ಟ್ರವಾಗಲಿದೆ.

ಭಾರತದ ಜನಸಂಖ್ಯೆಯಲ್ಲಿ ಶೇ.65ರಷ್ಟು ಯುವಕರಿದ್ದಾರೆ. ಭಾರತದ ಯುವ ಶಕ್ತಿಯನ್ನು ಕ್ರಿಯಾಶೀಲಗೊಳಿಸಿದರೆ ಭಾರತ ವಿಶ್ವದಲ್ಲಿ ಎಲ್ಲ ರಂಗದಲ್ಲೂ ಮುಂಚೂಣಿಯಲ್ಲಿರಲಿದೆ. ಪೋಷಕರು ಹಾಗೂ ಅಧ್ಯಾಪಕರು ಮಕ್ಕಳನ್ನು ಪಠ್ಯ ಚಟುವಟಿಕೆಗಳಿಗೆ ಮಾತ್ರ ಸೀಮಿತಗೊಳಿಸಬೇಡಿ. ಶಿಕ್ಷಣ ಪಡೆಯುವುದು ಉದ್ಯೋಗ ಪಡೆಯುವುದಕ್ಕೆ ಎಂಬ ಭಾವನೆಯನ್ನು ಬಿಡಿ. ಜ್ಞಾನ ಸಂಪಾದನೆಗಾಗಿ ಎಂಬುದನ್ನು ಅರಿತು ಯೋಗ, ಆಹಾರ ಪದ್ಧತಿ ಹಾಗೂ ಕ್ರೀಡಾ ಚಟುವಟಿಕೆಗಳ ಬಗ್ಗೆ ಆಸಕ್ತಿ ಬೆಳೆಸಿ ಎಂದು ವೆಂಕಯ್ಯ ನಾಯ್ಡು ಹೇಳಿದರು.

## ಮಾತೃಭಾಷೆ ಕಡೆಗಣಿಸದಿರಿ

ಜಗತ್ತಿನ ಯಾವುದೇ ಭಾಗದಲ್ಲಿಯಾದರೂ ಜೀವಿಸಿ. ಆದರೆ, ಮಾತೃ ಹಾಗೂ ಮಾತೃಭೂಮಿಯನ್ನು ಮರೆಯಬೇಡಿ. ಪಾಶ್ಚಿಮಾತ್ಯ ಸಂಸ್ಕೃತಿ, ಆಹಾರ ಪದ್ಧತಿ ಹಾಗೂ ಪರಭಾಷೆಗಳ ಮೋಹಕ್ಕೆ ಒಳಗಾಗಬೇಡಿ. ಕನ್ನಡ ನೆಲವು ಸಂಸ್ಕೃತಿ ಹಾಗೂ ಪರಂಪರೆ, ಶ್ರೀಮಂತಿಕೆಯನ್ನು ಹೊಂದಿದೆ. ಇಲ್ಲಿನ ಆಹಾರ ಪದ್ಧತಿ ಆರೋಗ್ಯಕ್ಕೆ ಯೋಗ್ಯವಾಗಿದೆ. ಭಾರತವು ವಿವಿಧತೆಯಲ್ಲಿ ಏಕತೆಯನ್ನು ಹೊಂದಿದ ರಾಷ್ಟ್ರವಾಗಿದೆ ಎಂದು ಉಪ ರಾಷ್ಟ್ರಪತಿ ವೆಂಕಯ್ಯ ನಾಯ್ಡು ತಿಳಿಸಿದರು.